ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 19ನೇ ಫೆಬ್ರವರಿ, 2020

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯದ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

ಶ್ರೀಯುತರುಗಳಾದ ಸಿದ್ದರಾಮಯ್ಯ, ಡಾ: ಜಿ. ಪರಮೇಶ್ವರ್, ರಾಮಲಿಂಗಾರೆಡ್ಡಿ, ಆರ್.ವಿ. ದೇಶಪಾಂಡೆ, ಹೆಚ್.ಕೆ. ಪಾಟೀಲ್ ಹಾಗೂ ಇತರರು – ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯು ಹಾಳಾಗಿರುವುದರಿಂದ ಅಮಾಯಕರು ಬಲಿಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2020ರ ಫೆಬ್ರವರಿ 17 ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 18ನೇ ಫೆಬ್ರವರಿ 2020 ರಂದು ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ರವರು ಸೂಚಿಸಿ, ಶ್ರೀ ಹೆಚ್. ಹಾಲಪ್ಪ ಹರತಾಳ್ ರವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ (ಎರಡನೇ ದಿನ).

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ. ಶ್ರೀನಿವಾಸಗೌಡ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು** – ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಅಂಗೀಕಾರಗೊಂಡಿದ್ದ ವಿವಿಧ ಇಲಾಖೆಗಳ ಕಾಮಗಾರಿಗಳನ್ನು ಆರ್ಥಿಕ ಬಿಕ್ಕಟ್ಟಿನಿಂದಾಗಿ ಸ್ಥಗಿತಗೊಳಿಸಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಬಂಡೆಪ್ಪ ಖಾಶೆಂಪೂರ, ಪ್ರಿಯಾಂಕ ಖರ್ಗೆ ಹಾಗೂ ಎಂ.ವೈ. ಪಾಟೀಲ ಇವರುಗಳು** – ತೊಗರಿಯನ್ನು ಬೆಂಬಲ ಬೆಲೆಯಲ್ಲಿ ರೈತರಿಂದ ಖರೀದಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ ರೇವಣ್ಣ, ಎ.ಟಿ. ರಾಮಸ್ವಾಮಿ, ಕೆ. ಶ್ರೀನಿವಾಸಗೌಡ, ಸಿ.ಎನ್. ಬಾಲಕೃಷ್ಣ ಹಾಗೂ ಇತರರು** –ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳಿಗಾಗಿ 2018–19ನೇ ಸಾಲಿನಲ್ಲಿ ಮಂಜೂರಾಗಿದ್ದ ಮೊತ್ತವನ್ನು ತಡೆಹಿಡಿದಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm